ಮುಖ್ಯವಾಗಿ ರಾಜ್ಯದಲ್ಲಿ ರಸ್ತೆಗಳ ದುರಸ್ಥಿಯ ಬಗ್ಗೆ ಹೆಚ್ಚು ಜನರು ವಿಧಾನಸಭೆಯಲ್ಲಿ ಪ್ರಸ್ತಾಪ ಮಾಡಿದ್ದಾರೆ. ಮುಖ್ಯವಾಗಿ ರಾಜ್ಯದಲ್ಲಿ ರಸ್ತೆಗಳ ದುರಸ್ಥಿಯ ಬಗ್ಗೆ ಹೆಚ್ಚು ಜನರು ವಿಧಾನಸಭೆಯಲ್ಲಿ ಪ್ರಸ್ತಾಪ ಮಾಡಿದ್ದಾರೆ. ಅದರ ಸಲುವಾಗಿ ಸರ್ಕಾರ ಒಂದು ನಿರ್ಧಾರವನ್ನು ತೆಗೆದುಕೊಂಡಿದೆ. ಅದರ ಪ್ರಕಾರ ಪ್ರತಿಯೊಂದು ಕ್ಷೇತ್ರದಲ್ಲಿ ಮೂವತ್ತು ಲಕ್ಷ ರೂಪಾಯಿಗಳನ್ನು ರಸ್ತೆಗಳ ರಿಪೇರಿಗಾಗಿ ಹಣವನ್ನು ಬಿಡುಗಡೆ ಮಾಡಬೇಕೆಂದು ತೀರ್ಮಾನ ಮಾಡಲಾಗಿದೆ. ಎರಡನೆಯದಾಗಿ ಸರ್ಕಾರ ಅಧಿಕಾರಕ್ಕೆ ಬಂದ ಹೊಸದರಲ್ಲಿ ಸುಮಾರು 73 ಕೋಟಿ ರೂಪಾಯಿಗಳಷ್ಟು ಪೆಂಡಿಂಗ್ ಬಿಲ್ ಇತ್ತು.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ನಾವು ಸರ್ಕಾರದ ನಿಲುವನ್ನು ವಿರೋಧಿಸಿ ಸಭಾತ್ಯಾಗ ಮಾಡುತ್ತಿದ್ದೇವೆ.

(ಸಿ.ಪಿ.ಎಂ. ಪಕ್ಷದ ಸದಸ್ಯರುಗಳಾದ ಶ್ರೀ ಶ್ರೀರಾಮರೆಡ್ಡಿಯವರು ಮತ್ತು ಎಸ್. ರಾಜೇಂದ್ರನರವರು ಸಭಾತ್ಯಾಗ ಮಾಡಿದರು)

ಶ್ರೀ ಎಲ್.ಆರ್. ಶಿವರಾಮೇಗೌಡ : ಲೋಕೋಪಯೋಗಿ ಸಚಿವರು ಸ್ವಲ್ಪ ಈಜ್ಡ ಆಗುವುದಾದರೆ ಹೇಳುತ್ತೇವೆ. ತಮಗೆ ಸ್ವಲ್ಪ ಇರುಸುಮುರುಸಾಗಬಹುದು. ಆದರೆ ವಿಧಿಯಿಲ್ಲ. ನಾವು ನಮ್ಮ ನಿಲುವನ್ನು ಹೇಳಿದ್ದೇವೆ. ತಮಗೆ ತಿಳಿಸಿದ್ದೇವೆ. ನಾವು ನಮಗೇನು ಕೇಳುತ್ತಿಲ್ಲ. ಇಡೀ ರಾಜ್ಯದ ಎಲ್ಲಾ ಶಾಸಕರಿಗೂ ಕೇಳುತ್ತಿದ್ದೇವೆ. ಒತ್ತುವರಿ ಸಮಿತಿಗೆ ಅಧ್ಯಕ್ಷರನ್ನಾಗಿ ಮಾಡಲು ನಮಗೆ ಸಾಧ್ಯವಿಲ್ಲವೆಂದು ಹೇಳುತ್ತೀರಿ. ಆಶ್ರಯ ಸಮಿತಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ಮಾಡಲು ಆಗುವುದಿಲ್ಲವೆಂದು ವಸತಿ ಸಚಿವರಾದ ಬಸವರಾಜರಾಯರೆಡ್ಡಿಯವರು ಹೇಳುತ್ತಾರೆ. ಆ ರೀತಿ ಇದ್ದ ಮೇಲೆ ಸರ್ಕಾರದ ನಿಲುವನ್ನು ಪ್ರತಿಭಟಿಸಿ ನಾವೂ ಅವರ ಜೊತೆಯಲ್ಲಿ ಸಭಾತ್ಯಾಗ ಮಾಡುತ್ತೇವೆ.

(ಪಕ್ಷೇತರ ಸದಸ್ಯರಾದ ಎಲ್.ಆರ್. ಶಿವರಾಮೇಗೌಡರು ಸಭಾತ್ಯಾಗ ಮಾಡಿದರು)

ಶ್ರೀ ಶಿವಾನಂದ ಹೆಚ್. ಕೌಜಲಗಿ : ಮಾನ್ಯ ಅಧ್ಯಕ್ಷರೆ, ಬೇಡಿಕೆಯ ಬಗ್ಗೆ ನನ್ನ ಮಾತನ್ನು ಮುಂದುವರೆಸುತ್ತೇನೆ. ಮಾನ್ಯ ಸದಸ್ಯರುಗಳು ಏನು ಸಲಹೆಗಳನ್ನು ನನ್ನ ಇಲಾಖೆಗೆ ಸಂಬಂಧಪಟ್ಟಂತೆ ಹೇಳಿದ್ದಾರೆ ಅದನ್ನು ಗಮನದಲ್ಲಿಟ್ಟು ಕೊಳ್ಳುತ್ತೇನೆ. ಮತ್ತು 43, 44, 45ನೇ ಬೇಡಿಕೆಗಳಿಗೆ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ, ಅನೇಕ ಮಾನ್ಯ ಸದಸ್ಯರುಗಳು ನನ್ನ ಹೆಚ್.ಯು.ಡಿ. ಇಲಾಖೆಗೆ ಸಂಬಂಧಪಟ್ಟಂತೆ ಸಲಹೆಗಳನ್ನು ಕೊಟ್ಟಿದ್ದಾರೆ. ಅವೆಲ್ಲವುಗಳನ್ನು ಗಮನದಲ್ಲಿಟ್ಟುಕೊಂಡು ಆ ಸಮಸ್ಯೆಗಳ ಬಗೆಹರಿಸಲು ಪ್ರಯತ್ನ ಪಡುತ್ತೇನೆಂದು ಹೇಳಿ ನನ್ನ ಇಲಾಖೆಗೆ ಬೇಡಿಕೆಗಳ ಒಪ್ಪಿಗೆ ಕೊಡಬೇಕೆಂದು ನಾನು ವಿನಂತಿ ಮಾಡುತ್ತೇನೆ.

ಅಧ್ಯಕ್ಷರು : ನಾನು ಈಗ ಬೇಡಿಕೆಗಳನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾಪ ಏನೆಂದರೆ

"31.3.1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬೇಡಿಕೆಗಳ ಸಂಖ್ಯೆ : 30, 31, 32, 54, 55, 33, 43, 44 ಮತ್ತು 45ಕ್ಕೆ ಸಂಬಂಧಿಸಿದಂತೆ ಸಂದಾಯ ಮಾಡುವಲ್ಲಿ ಬರತಕ್ಕಂಥ